ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಶ್ರೀ ಮಲೈ ಮಹದೇಶ್ವರ ಬೆಟ್ಟಕ್ಕೆ ಐರಾವತ ಬಸ್ ಸೌಲಭ್ಯ ಕಲ್ಪಿಸುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

200 (1629) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ ಜಿಲ್ಲೆಯ ಸುಪ್ರಸಿದ್ಧ ಧಾರ್ಮಿಕ ಯಾತ್ರಾಸ್ಥಳವಾದ ಶ್ರೀ ಮಲೈಮಹದೇಶ್ವರ ಬೆಟ್ಟಕ್ಕೆ ಬೆಂಗಳೂರು ಹಾಗೂ ಮೈಸೂರಿನಿಂದ ಕ.ರಾ.ರ.ಸಾ.ಸಂಸ್ಥೆಯ ಹವಾನಿಯಂತ್ರಿತ ವೊಲ್ವೋ (ಐರಾವತ) ಬಸ್‌ಗಳ ಸೌಲಭ್ಯ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದಲ್ಲಿ, ಇದುವರೆಗೂ ಸದರಿ ಬಸ್ ಸೌಲಭ್ಯ ಕಲ್ಪಿಸದಿರಲು ಕಾರಣಗಳೇನು; (ವಿವರ ನೀಡುವುದು)

(ಇ) ಬಸ್ ಸೌಲಭ್ಯ ಇಲ್ಲದೆ ಇರುವುದರಿಂದ ಯಾತ್ರಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಯಾವ ಕಾಲಮಿತಿಯಲ್ಲಿ ಬಸ್ ಸೌಲಭ್ಯ ಕಲ್ಪಿಸಲಾಗುವುದು ?